# ಕರ್ನಾಟಕ ವಿಧಾನ ಪರಿಷತ್ತು

## ನೂರ ಐವತ್ತೆರಡನೆಯ ಅಧಿವೇಶನ

## ಕಾರ್ಯಕಲಾಪಗಳ ಪಟ್ಟಿ

**ಗುರುವಾರ, ದಿನಾಂಕ:29ನೇ ಫೆಬ್ರವರಿ, 2024**

**(ಸಮಯ: ಬೆಳಗ್ಗೆ: 10.00 ಗಂಟೆಗೆ)**

* * *

### 01. ವಿತ್ತೀಯ ಕಾರ್ಯಕಲಾಪ

2024–25ನೇ ಸಾಲಿನ ಆಯವ್ಯಯ ಅಂದಾಜುಗಳ ಮೇಲಿನ ಮುಂದುವರೆದ ಚರ್ಚೆ ಹಾಗೂ ಸರ್ಕಾರದ ಉತ್ತರ

### 02. ಗಮನ ಸೆಳೆಯುವ ಸೂಚನೆಗಳು

01. **ಶ್ರೀ ಎನ್. ರವಿಕುಮಾರ್** ಅವರು ರಾಮನಗರ ಜಿಲ್ಲೆಯ ಮಾಗಡಿ ತಾಲ್ಲೂಕಿನ ಕಲ್ಯಾ ಪಂಚಾಯತಿ ವ್ಯಾಪ್ತಿಯ ಹುಜಗಲ್‌ನ ಕಾಡಿನಲ್ಲಿ ವಾಸ ಮಾಡುತ್ತಿರುವ ಇರಳಿಗ ಸಮುದಾಯದವರಿಗೆ ಹಕ್ಕುಪತ್ರ ನೀಡಿ ಮೂಲಭೂತ ಸೌಕರ್ಯಗಳನ್ನು ಒದಗಿಸುವ ಕುರಿತು ಮಾನ್ಯ ಕಂದಾಯ ಸಚಿವರ ಗಮನ ಸೆಳೆಯುವುದು.

02. **ಶ್ರೀಯುತರುಗಳಾದ ಮರಿತಿಬ್ಬೇಗೌಡ, ಎಸ್.ಎಲ್. ಭೋಜೇಗೌಡ, ಮಧು ಜಿ. ಮಾದೇಗೌಡ ಹಾಗೂ ಅ. ದೇವೇಗೌಡ** ಅವರುಗಳು 1995ರ ನಂತರ ಪ್ರಾರಂಭವಾಗಿರುವ ಅನುದಾನ ರಹಿತ ಕನ್ನಡ ಮಾಧ್ಯಮ ಶಾಲಾ ಕಾಲೇಜುಗಳ ಬೋಧಕ/ಬೋಧಕೇತರರಿಗೆ ಸೇವಾ ಭದ್ರತೆ ಇಲ್ಲದಿರುವ ಹಾಗೂ ವಿದ್ಯಾರ್ಥಿಗಳಿಗೆ ಯಾವುದೇ ರೀತಿಯ ಸರ್ಕಾರದಿಂದ ಉಚಿತ ಸೌಲಭ್ಯ ದೊರೆಯದೆ ಇರುವುದರಿಂದ ಶಾಲೆಗಳನ್ನು ಮುಚ್ಚುವ ಪರಿಸ್ಥಿತಿ ಕುರಿತು ಮಾನ್ಯ ಶಾಲಾ ಶಿಕ್ಷಣ ಮತ್ತು ಸಾಕ್ಷರತಾ ಸಚಿವರ ಗಮನ ಸೆಳೆಯುವುದು.

03. **ಶ್ರೀ ಕೆ.ಪಿ. ನಂಜುಂಡಿ ವಿಶ್ವಕರ್ಮ** ಅವರು ವಿಧಾನಸೌಧ, ವಿಕಾಸಸೌಧ ಮತ್ತು ಶಾಸಕರ ಭವನದ ಆವರಣದಲ್ಲಿ ವಿಶ್ವಕರ್ಮ ಸಮಾಜದ ಭಗವಾನ್ ವಿಶ್ವಕರ್ಮ ಅಥವಾ ಅಮರಶಿಲ್ಪಿ ಜಕಣಾಚಾರಿ ಪ್ರತಿಮೆಯನ್ನು ಸ್ಥಾಪಿಸುವ ಕುರಿತು ಮಾನ್ಯ ಹಿಂದುಳಿದ ವರ್ಗಗಳ ಕಲ್ಯಾಣ ಹಾಗೂ ಕನ್ನಡ ಮತ್ತು ಸಂಸ್ಕೃತಿ ಸಚಿವರ ಗಮನ ಸೆಳೆಯುವುದು.

04. **ಶ್ರೀ ಯು.ಬಿ. ವೆಂಕಟೇಶ್** ಅವರು ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ ವ್ಯಾಪ್ತಿಯಲ್ಲಿ ನಿರ್ವಹಿಸಿರುವ ಕಾಮಗಾರಿಗಳಿಗೆ ಎರಡೆರಡು ಬಾರಿ ಬಿಲ್ ಪಾವತಿಯಾಗಿರುವುದರಿಂದ ಸರ್ಕಾರಕ್ಕೆ ಆರ್ಥಿಕ ನಷ್ಟ ಉಂಟಾಗಿರುವ ಕುರಿತು ಮಾನ್ಯ ಉಪ ಮುಖ್ಯಮಂತ್ರಿಗಳ ಗಮನ ಸೆಳೆಯುವುದು.

.2..

೦೫. **ಶ್ರೀಯುತರುಗಳಾದ ವೈ.ಎಂ. ಸತೀಶ್, ಡಿ.ಎಸ್. ಅರುಣ್, ಕೆ.ಎಸ್. ನವೀನ್ ಹಾಗೂ ಎಸ್. ರುದ್ರೇಗೌಡ** ಅವರುಗಳು ತುಂಗಭದ್ರಾ ನದಿಯಲ್ಲಿ ಹಾನಿಕಾರಕ ಲೋಹಗಳು ಪತ್ತೆಯಾಗಿದ್ದು, ಕಲುಷಿತ ನೀರು ಕುಡಿಯಲು ಮತ್ತು ಕೃಷಿಗೆ ಬಳಸಲು ಯೋಗ್ಯವಲ್ಲದಿರುವುದರಿಂದ ಶುದ್ಧೀಕರಿಸಲು ಕ್ರಮ ಕೈಗೊಳ್ಳುವ ಕುರಿತು ಮಾನ್ಯ ಅರಣ್ಯ, ಜೀವಿ ಪರಿಸ್ಥಿತಿ ಮತ್ತು ಪರಿಸರ ಸಚಿವರ ಗಮನ ಸೆಳೆಯುವುದು.

**ಕೆ.ಆರ್. ಮಹಾಲಕ್ಷ್ಮಿ**
**ಕಾರ್ಯದರ್ಶಿ**

---

**ಪ್ರತಿ ದಿನದ ವಿಧಾನ ಪರಿಷತ್ತಿನ ಕಾರ್ಯಕಲಾಪಗಳ ಪಟ್ಟಿಯನ್ನು ವೆಬ್‌ಸೈಟ್‌ನಲ್ಲಿಯೂ ಸಹ ಪಡೆದುಕೊಳ್ಳಬಹುದು.**
**www.kla.kar.nic.in/council/council.htm**